# ಅಂಗನವಾಡಿಗಳ ಸೌಕರ್ಯ ಅಭಿವೃದ್ಧಿ

ದೊಡ್ಡಬಳ್ಳಾಪುರ: 3 ರಿಂದ 6 ವರ್ಷಗಳ ಮಕ್ಕಳ ಚಟುವಟಿಕೆ ಹಾಗೂ ಪಡೆಯುವ ಶಿಕ್ಷಣ ಅವರ ಮುಂದಿನ ಭವಿಷ್ಯಕ್ಕೆ ದಾರಿದೀಪವಾಗಲಿದೆ. ಈ ನಿಟ್ಟಿನಲ್ಲಿ ತಾಲ್ಲೂಕಿನ 50 ಅಂಗನವಾಡಿಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ಬಾಶೆಟ್ಟಿಹಳ್ಳಿಯಲ್ಲಿ ಮಾದರಿ ಕಲಿಕಾ ಕೇಂದ್ರವನ್ನು ತೆರೆಯುವ ಮೂಲಕ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಲಾಗುತ್ತಿದೆ ಎಂದು ಬಾಲ ರಕ್ಷಾ ಭಾರತ್ ಸಂಸ್ಥೆ ಮುಖ್ಯಸ್ಥೆ ಅರ್ಚನಾ ಗಣೇಶ್‌ರಾಜ್ ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸೇವ್ ದ ಚಿಲ್ಡ್ರನ್- ಬಾಲ ರಕ್ಷಾ ಭಾರತ್, ಮಕ್ಕಳ ಜಾಗೃತಿ ಸಂಸ್ಥೆ, ಶಾಲಾ ಪೂರ್ವ ಶಿಕ್ಷಣ ಅಭಿವೃದ್ಧಿ ಯೋಜನೆ ಸಹಯೋಗದಲ್ಲಿ ತಾಲ್ಲೂಕಿನ ಬಾಶೆಟ್ಟಿಯಳ್ಳಿ ಅಂಗನವಾಡಿ ಮಾದರಿ ಕಲಿಕಾ ಕೇಂದ್ರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳ ಪ್ರಾಥಮಿಕ ಕಲಿಕೆಗೆ ಖಾಸಗಿಯಾಗಿ ಹಲವಾರು ನರ್ಸರಿ ಶಾಲೆಗಳು, ಪ್ಲೇ ಹೋಂಗಳು ಇವೆ. ಆದರೆ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಇದು ಹೊರೆ. ಇದನ್ನು ಮನಗಂಡ ನಮ್ಮ ಸಂಸ್ಥೆಯ ವತಿಯಿಂದ ಮಕ್ಕಳಿಗೆ ಪ್ಲೇ ಹೋಂ ವಾತಾವರಣದೊಂದಿಗೆ ಸೃಜನಶೀಲ ಶಿಕ್ಷಣ ಹಾಗೂ ಆರೋಗ್ಯ ನೀಡಲು ಮಾದರಿ ಕಲಿಕಾ ಕೇಂದ್ರ ತೆರೆಯಲಾಗಿದೆ ಎಂದರು.



ಬಾಲ ರಕ್ಷಾ ಭಾರತ್ ಸಂಸ್ಥೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಬಿ. ಕೃಷ್ಣಪ್ಪ ಮಾತನಾಡಿದರು

ಮಕ್ಕಳ ಜಾಗೃತಿ ವ್ಯವಸ್ಥಾಪಕ ಮುರಳಿ ಮಾತನಾಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕನ್ನು ಆಯ್ಕೆ ಮಾಡಿಕೊಂಡು 50 ಅಂಗನವಾಡಿಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಮಾಡಲಾಗುತ್ತಿದೆ. ಕೈಗಾರಿಕಾ ಪ್ರದೇಶದಲ್ಲಿ ಉದ್ಯೋಗಕ್ಕೆ ತೆರಳುವ ಪೋಷಕರು ಹೆಚ್ಚಾಗಿ ಇರುವುದರಿಂದ ಬಾಶೆಟ್ಟಿಯಳ್ಳಿಯನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದರು.

ಬಾಶೆಟ್ಟಿಹಳ್ಳಿ ಪಿಡಿಒ ಕುಮಾರ್ ಮಾತನಾಡಿ, ಮಕ್ಕಳ ಶ್ರೇಯೋಭಿವೃದ್ಧಿಗಾಗಿ ನಮ್ಮ ಗ್ರಾಮ ಪಂಚಾಯಿತಿಯನ್ನು ಆಯ್ಕೆ ಮಾಡಿಕೊಂಡಿರುವುದು ಸಂತಸದ ವಿಚಾರವಾಗಿದೆ. ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮ ಪಂಚಾಯಿತಿಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದರು.

ತಾಲ್ಲೂಕು ಪಂಚಾಯಿತಿ ಸದಸ್ಯೆ ರೇಣುಕಾರಾಜಣ್ಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಶೋಭಾ, ಬಾಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಬಿ.ಕೃಷ್ಣಪ್ಪ, ರಾಧಾಮಣಿ, ನೇತ್ರಾವತಿ, ರತ್ನಮ್ಮ, ಶೋಭಾ, ಚಂದ್ರಶೇಖರ್ ಹಾಗೂ ಅಂಗನವಾಡಿ ಶಿಕ್ಷಕರು, ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.